All India Radio: Bangalore
National Bulletin In Kannada
07.11.2026 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ದೇಶಾದ್ಯಂತ ನಾಳೆಯಿಂದ ದೀಪಾವಳಿ ಸಂಭ್ರಮ; ಮುನ್ನ ದಿನವಾದ ಇಂದು ರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರಿಂದ ಶುಭಾಶಯ
- "ಕರ್ನಾಟಕದ ಪೆಟ್ರೋಲ್‌ನಲ್ಲಿ ಅತಿಯಾದ ಎಥೆನಾಲ್ ಅಂಶ ಪತ್ತೆ ಆರೋಪ ತಿರಸ್ಕರಿಸಿದ ಕೇಂದ್ರ ಪೆಟ್ರೋಲಿಯಂ ಸಚಿವಾಲಯ"
- "ಈಶಾನ್ಯ ಭಾರತದ ಭದ್ರತೆ; ವಾಯುಪಡೆಯ ಸಿಬ್ಬಂದಿ ಸನ್ನದ್ಧತೆ ಕಾಯ್ದುಕೊಳ್ಳುವಂತೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕರೆ".
- ಏಕದಿನ ಕ್ರಿಕೆಟ್; ಮಳೆ ಅಡ್ಡಿಪಡಿಸಿದ ಪಂದ್ಯದಲ್ಲಿ ನ್ಯೂಜಿಲೆಂಡ್ ವಿರುದ್ಧ ಭಾರತಕ್ಕೆ ಜಯ

<>><><*><><<>

ದೀಪಾವಳಿಯ ಮುನ್ನಾದಿನವಾದ ಇಂದು ಭಾರತದಲ್ಲಿ ಹಾಗೂ ವಿದೇಶಗಳಲ್ಲಿ ವಾಸಿಸುತ್ತಿರುವ ಎಲ್ಲಾ ಭಾರತೀಯರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಶುಭಾಶಯ ಕೋರಿದ್ದಾರೆ. ದೇಶವಾಸಿಗಳಿಗೆ ಅವರು ನೀಡಿದ ತಮ್ಮ ಸಂದೇಶದಲ್ಲಿ, ದೀಪಾವಳಿ ಹಬ್ಬವು ನಕಾರಾತ್ಮಕ ಪ್ರವೃತ್ತಿಗಳ ಮೇಲೆ ಸದ್ಗುಣಗಳ ವಿಜಯವನ್ನು ಸೂಚಿಸುತ್ತದೆ. ಈ ಹಬ್ಬವು ಸಂಕಷ್ಟಗಳ ಅಂತ್ಯವನ್ನು ಹಾಗೂ ಸಂತೋಷಭರಿತ ಮತ್ತು ಸಮೃದ್ಧ ಜೀವನದ ಆರಂಭವನ್ನು ಸಂಕೇತಿಸುತ್ತದೆ ಎಂದು ರಾಷ್ಟ್ರಪತಿಗಳು ತಿಳಿಸಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಕೂಡ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಶುಭಾಶಯಗಳನ್ನು ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಸಂದೇಶವೊಂದನ್ನು ಹಂಚಿಕೊಂಡಿರುವ ಪ್ರಧಾನಿ, ದೀಪಗಳ ಈ ಹಬ್ಬವು ಇಡೀ ದೇಶವನ್ನು ಬೆಳಗಿಸುತ್ತದೆ ಮತ್ತು ಕತ್ತಲೆಯನ್ನು ಹೋಗಲಾಡಿಸುವ ದೃಢ ಸಂಕಲ್ಪವನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ. ಈ ಹಬ್ಬವು, ಮುಂದಿನ ದಿನಗಳಲ್ಲಿ ಎಲ್ಲರಿಗೂ ಸಂತೋಷ, ಶಾಂತಿ ಮತ್ತು ಸಮೃದ್ಧಿಯನ್ನು ತರಲಿ ಎಂದು ಅವರು ಹಾರೈಸಿದ್ದಾರೆ. ಹಿಂದಿನ ವರ್ಷಗಳಂತೆಯೇ ಈ ಬಾರಿಯೂ ತಾವು ದೇಶದ ವೀರ ಸೈನಿಕರೊಂದಿಗೆ ಹಬ್ಬವನ್ನು ಅತ್ಯಂತ ಉತ್ಸಾಹದಿಂದ ಆಚರಿಸುವ ಸಂಪ್ರದಾಯವನ್ನು ಮುಂದುವರಿಸುವುದಾಗಿ ಹೇಳಿದ್ದಾರೆ.

<>><><*><><<>

ರಾಜ್ಯದ ಕೆಲವು ಪೆಟ್ರೋಲ್ ಬಂಕ್‌ಗಳಲ್ಲಿ ಮಾರಾಟವಾಗುತ್ತಿರುವ ಇಂಧನದಲ್ಲಿ ಅತಿಯಾದ ಎಥೆನಾಲ್ ಅಂಶ ಪತ್ತೆಯಾಗಿದೆ ಎಂಬ ಕರ್ನಾಟಕ ಸರ್ಕಾರದ ಹೇಳಿಕೆಯನ್ನು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿರಸ್ಕರಿಸಿದೆ. ಕರ್ನಾಟಕ ಸೇರಿದಂತೆ ದೇಶಾದ್ಯಂತ ಸಾರ್ವಜನಿಕ ವಲಯದ ತೈಲ ಮಾರುಕಟ್ಟೆ ಕಂಪನಿಗಳು ಪೂರೈಸುವ ಇ-೨೦ ಪೆಟ್ರೋಲ್ ನಿಗದಿತ ಗುಣಮಟ್ಟದ ಮಾನದಂಡಗಳಿಗೆ ಅನುಗುಣವಾಗಿದೆ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ. ರಾಜ್ಯದಲ್ಲಿ ಮೂರು ಕಂಪೆನಿಗಳು ಪೂರೈಸುವ ಇ-೨೦ ಪೆಟ್ರೋಲ್, ಎಥೆನಾಲ್-ಮಿಶ್ರಿತ ಮೋಟಾರ್ ಗ್ಯಾಸೋಲಿನ್‌ಗಾಗಿ, ಭಾರತೀಯ ಗುಣಮಟ್ಟ ಮಂಡಳಿಯ ಐಎಸ್-೧೭೦೨೧ ನಿಯಮಾವಳಿಗಳಿಗೆ ಸಂಪೂರ್ಣ ಬದ್ಧವಾಗಿದೆ. ಕರ್ನಾಟಕದ ೫೬ ಸೇರಿದಂತೆ ೨೭ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಸಂಗ್ರಹಿಸಲಾದ

೮೯೩ ಮಾದರಿಗಳು ನಿಗದಿತ ಮಾನದಂಡಗಳಿಗೆ ಅನುಗುಣವಾಗಿವೆ ಎಂದು ಸಚಿವಾಲಯ ಹೇಳಿದೆ. ಕರ್ನಾಟಕದಲ್ಲಿ ಪರೀಕ್ಷಿಸಲಾದ ಎಲ್ಲಾ ೫೬ ಮಾದರಿಗಳಲ್ಲಿ ಐಎಸ್-೧೭೦೨೧ ಮಾನದಂಡಗಳಂತೆ, ಶೇಕಡಾ ೧೯ ರಿಂದ ೨೦ ರವರೆಗೆ ಎಥೆನಾಲ್ ಅಂಶವಿದೆ ಎಂದು ಸಚಿವಾಲಯ ಸ್ಪಷ್ಟಪಡಿಸಿವೆ.

<>><><*><><<>

ಈಶಾನ್ಯ ಭಾರತದ ಭದ್ರತೆಯನ್ನು ಕಾಪಾಡುವ ದೃಷ್ಟಿಯಿಂದ ಬಾಗೊಡ್ಗೀಗ್ರಾ ಪ್ರದೇಶದ ಕಾರ್ಯತಂತ್ರದ ಮಹತ್ವವನ್ನು ಪರಿಗಣಿಸಿ, ಅಲ್ಲಿ ನಿಯೋಜನೆಗೊಂಡಿರುವ ವಾಯುಪಡೆಯ ಸಿಬ್ಬಂದಿ ಉನ್ನತ ಮಟ್ಟದ ಕಾರ್ಯಾಚರಣೆಯ ಸಿದ್ಧತೆ ಮತ್ತು ಎಚ್ಚರಿಕೆಯನ್ನು ಸದಾ ಕಾಯ್ದುಕೊಳ್ಳಬೇಕು ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕರೆ ನೀಡಿದ್ದಾರೆ. ಸಿಕ್ಕಿಂಗೆ ತೆರಳುವ ಮೊದಲು ಸಿಲಿಗುರಿಯ ಬಾಗೊಡ್ಗೀಗ್ರಾ ವಿಮಾನ ನಿಲ್ದಾಣದಲ್ಲಿ ವಾಯುಪಡೆಯ ಸಿಬ್ಬಂದಿಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಆಧುನಿಕ ಯುದ್ಧದ ಸ್ವರೂಪವು ವೇಗವಾಗಿ ಬದಲಾಗುತ್ತಿದ್ದು, ಅದು ಇನ್ನು ಮುಂದೆ ಗಡಿಗಳಲ್ಲಿ ನಡೆಯುವ ಸಾಂಪ್ರದಾಯಿಕ ಯುದ್ಧವಾಗಿ ಮಾತ್ರ ಉಳಿದಿಲ್ಲ ಎಂದು ಅವರು ಹೇಳಿದರು. ಸೈಬರ್ ದಾಳಿಗಳು, ಡ್ರೋನ್ ಯುದ್ಧತಂತ್ರ, ಪರೋಕ್ಷ ಯುದ್ಧಗಳು ಹಾಗೂ ಸಾಮಾಜಿಕ ಮಾಧ್ಯಮಗಳ ಮೂಲಕ ಸುಳ್ಳು ಮಾಹಿತಿಯನ್ನು ಹರಡುವುದು ಸೇರಿದಂತೆ ಮಾಹಿತಿ ಯುದ್ಧಗಳು ಪ್ರಮುಖ ಭದ್ರತಾ ಸವಾಲುಗಳಾಗಿ ಹೊರಹೊಮ್ಮಿವೆ ಎಂದು ಸಚಿವರು ತಿಳಿಸಿದರು. ಈ ಹೊಸದಾಗಿ ಎದುರಾಗುತ್ತಿರುವ ಬೆದರಿಕೆಗಳನ್ನು ಎದುರಿಸಲು ಸೇನಾ ಸಿಬ್ಬಂದಿ ತಾಂತ್ರಿಕ ಜ್ಞಾನವನ್ನು ಹೊಂದಿರಬೇಕು ಮತ್ತು ಅಗತ್ಯ ಸಾಧನಗಳಿಂದ ಸುಸಜ್ಜಿತರಾಗಿರಬೇಕು. ಧೈರ್ಯ, ಶಿಸ್ತು, ಉನ್ನತ ಮನೋಬಲ ಮತ್ತು ಬಲವಾದ ಜವಾಬ್ದಾರಿಯ ಪ್ರಜ್ಞೆ ಇಲ್ಲದೆ ಕೇವಲ ಅತ್ಯಾಧುನಿಕ ತಂತ್ರಜ್ಞಾನದಿಂದ ಮಾತ್ರ ವಿಜಯ ಸಾಧಿಸಲು ಸಾಧ್ಯವಿಲ್ಲ ಎಂದು ಸಚಿವ ರಾಜನಾಥ್ ಸಿಂಗ್ ಒತ್ತಿಹೇಳಿದರು.

<>><><*><><<>

ಉತ್ತರಪ್ರದೇಶದ ಅಯೋಧ್ಯೆಯಲ್ಲಿ ಇಂದು ಹತ್ತನೇ ದೀಪೋತ್ಸವವನ್ನು ಅತ್ಯಂತ ವೈಭವದಿಂದ ಆಚರಿಸಲಾಗುತ್ತಿದೆ. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹಾಗೂ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಭಗವಾನ್ ಶ್ರೀರಾಮ ಮತ್ತು ಜಾನಕಿ ದೇವಿಗೆ ಪೂಜೆ ಸಲ್ಲಿಸಿ, ಆರತಿ ಬೆಳಗಿದರು. ಇದಕ್ಕೂ ಮುನ್ನ ಉಪರಾಷ್ಟ್ರಪತಿಯವರು ಅಯೋಧ್ಯಾ ಧಾಮದ ಮಹರ್ಷಿ ವಾಲ್ಮೀಕಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದ್ದು, ರಾಜ್ಯಪಾಲ ಆನಂದಿಬೆನ್ ಪಟೇಲ್ ಸೇರಿದಂತೆ ಗಣ್ಯರು ಅವರನ್ನು ಆತ್ಮೀಯವಾಗಿ ಸ್ವಾಗತಿಸಿದರು. ಶ್ರೀರಾಮ ಜನ್ಮಭೂಮಿ ದೇವಸ್ಥಾನದ ಆವರಣದಲ್ಲಿ ಒಂದು ಲಕ್ಷ ಮಣ್ಣಿನ ದೀಪಗಳನ್ನು ಬೆಳಗಿಸಿ ಅಲಂಕರಿಸಲಾಗಿದೆ.

<>><><*><><<>

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಅಹಮದಾಬಾದ್‌ನಲ್ಲಿಂದು ಉನ್ನತ ಮಟ್ಟದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ, ರಾಜ್ಯ ಹಾಗೂ ರಾಷ್ಟ್ರೀಯ ಭದ್ರತೆಯ ವಿವಿಧ ಆಯಾಮಗಳ ಕುರಿತು ಸುದೀರ್ಘ ಚರ್ಚೆ ನಡೆಸಿದರು. ಗಡಿ ಮತ್ತು ಕರಾವಳಿ ಭದ್ರತೆ, ಮಾದಕವಸ್ತು ನಿಯಂತ್ರಣ, ಸೈಬರ್ ಅಪರಾಧ ಹಾಗೂ ವಿಪತ್ತು ನಿರ್ವಹಣೆ ಸೇರಿದಂತೆ ಪ್ರಮುಖ ವಿಷಯಗಳಲ್ಲಿ ಆಗಿರುವ ಪ್ರಗತಿಯನ್ನು ಅವರು ಪರಿಶೀಲಿಸಿದರು. ಪೌರತ್ವ ತಿದ್ದುಪಡಿ ಕಾಯ್ದೆ, ಮುಂಬರುವ ಜನಗಣತಿ ಹಾಗೂ ಅಗ್ನಿವೀರ್ ಯೋಜನೆಯ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಯಿತು. ಮಾದಕವಸ್ತುಗಳ ಪಿಡುಗನ್ನು ತಡೆಗಟ್ಟುವ ತುರ್ತು ಅಗತ್ಯವನ್ನು ಒತ್ತಿಹೇಳಿದ ಸಚಿವರು, ೨೦೨೯ರ ವೇಳೆಗೆ 'ಮಾದಕವಸ್ತು ಮುಕ್ತ ಭಾರತ' ನಿರ್ಮಿಸುವ ಗುರಿ ಸಾಧನೆಗೆ ಅಧಿಕಾರಿಗಳು ಶ್ರಮಿಸುವಂತೆ ಸೂಚಿಸಿದರು. ಈ ನಿಟ್ಟಿನಲ್ಲಿ ವ್ಯಾಪಕ

ಸಾಮಾಜಿಕ ಜಾಗೃತಿ ಮೂಡಿಸುವುದು, ಮಾದಕವಸ್ತುಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದು ಹಾಗೂ ತೀವ್ರ ಕಾರ್ಯಾಚರಣೆಗಳ ಸಮನ್ವಯಕ್ಕಾಗಿ ೧೯೩೩ ಮಾದಕವಸ್ತು ವಿರೋಧಿ ಸಹಾಯವಾಣಿಯ ವ್ಯಾಪ್ತಿಯನ್ನು ವಿಸ್ತರಿಸುವ ಅಗತ್ಯವನ್ನು ಅವರು ಪ್ರತಿಪಾದಿಸಿದರು.

<><><><*><><><>

ದೀಪಾವಳಿ ಮತ್ತು ಛತ್ ಪೂಜೆಯಂತಹ ಹಬ್ಬದ ಸಂದರ್ಭಗಳಲ್ಲಿ ಪ್ರಯಾಣಿಕರ ದಟ್ಟಣೆಯನ್ನು ನಿಭಾಯಿಸಲು ಸುಮಾರು ೧೮ ಸಾವಿರ ವಿಶೇಷ ರೈಲುಗಳ ವ್ಯವಸ್ಥೆ ಮಾಡಲಾಗಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಳೆದ ವರ್ಷ ಇದೇ ಹಬ್ಬಗಳ ಸಂದರ್ಭದಲ್ಲಿ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಸುಮಾರು ೧೨ ಸಾವಿರ ವಿಶೇಷ ರೈಲುಗಳ ವ್ಯವಸ್ಥೆ ಮಾಡಲಾಗಿತ್ತು ಎಂದು ಹೇಳಿದರು.

<><><><*><><><>

'ಕಾಶಿ ತಮಿಳು ಸಂಗಮಂ ೩.೦' ಉಪಕ್ರಮದ ಅಡಿಯಲ್ಲಿ, ದೇಶಾದ್ಯಂತ ಇರುವ ಒಂದು ಸಾವಿರ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ನೋಂದಾಯಿಸಿಕೊಳ್ಳಲು ಮತ್ತು ತಲಾ ಒಬ್ಬ ವಿದ್ಯಾರ್ಥಿಯನ್ನು ನಾಮನಿರ್ದೇಶನ ಮಾಡಲು ಶಿಕ್ಷಣ ಸಚಿವಾಲಯ ಆಹ್ವಾನ ನೀಡಿದೆ. ಸಾಮಾಜಿಕ ಜಾಲತಾಣದಲ್ಲಿ ಈ ಬಗ್ಗೆ ಮಾಹಿತಿ ನೀಡಿರುವ ಸಚಿವಾಲಯ, ವಿದ್ಯಾರ್ಥಿಗಳು ತಮ್ಮಿಷ್ಟದ ಭಾಷೆಯಲ್ಲಿ 'ತಿರುಕ್ಕುರಳ್'ನ ಶ್ರೇಷ್ಠ ಪದ್ಯಗಳನ್ನು ಅಧ್ಯಯನ ಮಾಡಲು ಪ್ರೋತ್ಸಾಹಿಸುವುದು ಈ ಉಪಕ್ರಮದ ಉದ್ದೇಶವಾಗಿದೆ ಎಂದು ತಿಳಿಸಿದೆ. ಆಯ್ಕೆಯಾದ ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್ ಮಾಡುವ ಅವಕಾಶ ಸಿಗಲಿದ್ದು, ಅವರಿಗೆ ತಲಾ ೧೦ ಸಾವಿರ ರೂಪಾಯಿಗಳ ವಿದ್ಯಾರ್ಥಿವೇತನ ಕೂಡ ನೀಡಲಾಗುತ್ತದೆ. ಆಸಕ್ತ ಶಿಕ್ಷಣ ಸಂಸ್ಥೆಗಳು ಅಧಿಕೃತ ಜಾಲತಾಣದಲ್ಲಿ ನೋಂದಾಯಿಸಿಕೊಳ್ಳಬಹುದು ಎಂದು ಸಚಿವಾಲಯ ತಿಳಿಸಿದೆ.

<><><><*><><><>

ವೆಲ್ಲಿಂಗ್ಟನ್‌ನ ಹೆನ್ರಿ ಕ್ರೀಡಾಂಗಣದಲ್ಲಿ ಇಂದು ಪುರುಷರ ಎರಡನೇ ಏಕದಿನ ಕ್ರಿಕೆಟ್‌ನ ಮಳೆಯಿಂದ ಭಾಧಿತ ಪಂದ್ಯದಲ್ಲಿ, ಡಕ್‌ವರ್ತ್-ಲೂಯಿಸ್ ನಿಯಮದ ಅನ್ವಯ ಭಾರತವು ನ್ಯೂಜಿಲೆಂಡ್ ವಿರುದ್ಧ ನಾಲ್ಕು ರನ್‌ಗಳ ಜಯ ಸಾಧಿಸಿತು. ಮೊದಲು ಬ್ಯಾಟಿಂಗ್ ಮಾಡಿದ ನ್ಯೂಜಿಲೆಂಡ್, ೪೧ ಓವರ್‌ಗಳಲ್ಲಿ ಭಾರತಕ್ಕೆ ೧೩೪ ರನ್‌ಗಳ ಗುರಿ ನೀಡಿತು. ಗುರಿ ಬೆನ್ನತ್ತಿದ ಭಾರತ ಮಳೆಯಿಂದ ಪಂದ್ಯ ಸ್ಥಗಿತಗೊಂಡ ಸಂದರ್ಭದಲ್ಲಿ, ೨೬ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೧೩ ರನ್ ಗಳಿಸಿದ್ದು, ಗೆಲುವಿಗಾಗಿ ೬೬ ಎಸೆತಗಳಲ್ಲಿ ೨೨ ರನ್‌ಗಳ ಅಗತ್ಯವಿತ್ತು. ಹಾಗಾಗಿ ಡಕ್‌ವರ್ತ್-ಲೂಯಿಸ್ ನಿಯಮದ ಅನ್ವಯ ಭಾರತ ವಿಜಯದ ನಗೆ ಬೀರಿತು.

<><><><*><><><>

ಉಕ್ರೇನ್ ಮೇಲೆ ರಷ್ಯಾ ರಾತ್ರೋರಾತ್ರಿ ಭಾರೀ ಪ್ರಮಾಣದ ದಾಳಿ ನಡೆಸಿದ್ದು, ೧೭೨ ಡ್ರೋನ್‌ಗಳು ಮತ್ತು ೩೬ ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ಉಡಾಯಿಸಿದೆ ಎಂದು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಇಂದು ತಿಳಿಸಿದ್ದಾರೆ. ಈ ಎಲ್ಲಾ ಕ್ಷಿಪಣಿಗಳು ರಾಜಧಾನಿ ಕೀವ್ ಮತ್ತು ಸುತ್ತಮುತ್ತಲಿನ ಪ್ರದೇಶಗಳನ್ನು ಗುರಿಯಾಗಿಸಿಕೊಂಡಿದ್ದವು ಎಂದು ವರದಿಯಾಗಿದೆ. ಉಕ್ರೇನ್ ರಾಜಧಾನಿ ಕೀವ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಮೇಲೆ ನಡೆದ ದಾಳಿಯಲ್ಲಿ ಒಬ್ಬರು ಮೃತಪಟ್ಟಿದ್ದು, ಮಗು ಸೇರಿದಂತೆ ಎಂಟು ಮಂದಿ ಗಾಯಗೊಂಡಿದ್ದಾರೆ. ದಾಳಿಯಿಂದ ದೇಶದ ಇಂಧನ ಮೂಲಸೌಕರ್ಯ ಹಾಗೂ ಡ್ನಿಪ್ರೊ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಪ್ರಮುಖ ಸೇತುವೆಗೆ ಹಾನಿಯಾಗಿದೆ ಎಂದು

ಅಧಿಕಾರಿಗಳು ತಿಳಿಸಿದ್ದಾರೆ.

<><*><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>